# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 700 |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.12.2024 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ತಾಲ್ಲೂಕು ಪಂಚಾಯತ್ ಮತ್ತು ಜಿಲ್ಲಾ ಪಂಚಾಯತ್ ಚುನಾವಣೆಯನ್ನು ನಡೆಸದೇ ಇರಲು ಕಾರಣವೇನು; ಚುನಾವಣೆ ನಡೆಸದಿದ್ದರೆ ಅಧಿಕಾರ ವಿಕೇಂದ್ರೀಕರಣ ಆಶಯ ಈಡೇರಿದಂತಾಗುತ್ತದೆಯೇ; ಚುನಾವಣೆಯನ್ನು ನಡೆಸಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು; | ಸರ್ಕಾರವು ಕರ್ನಾಟಕ ಗ್ರಾಮಸ್ವರಾಜ್ ಮತ್ತು ಪಂಚಾಯತ್ ರಾಜ್(ತಿದ್ದುಪಡಿ) ಅಧಿನಿಯಮ 2021, ದಿನಾಂಕ: 18-9-2021ರ ಪ್ರಕರಣ 124, 163 ರಡಿಯಲ್ಲಿ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ ನಿರ್ಣಯ ಹಾಗೂ ಪ್ರಕರಣ 123, 162 ರಡಿಯಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿ ಕ್ಷೇತ್ರಗಳ ಮೀಸಲಾತಿಯನ್ನು ನಿಗದಿಪಡಿಸುವ ಅಧಿಕಾರವನ್ನು ಹೊಂದಿರುತ್ತದೆ.<br><br>ಈ ತಿದ್ದುಪಡಿಯ ಪ್ರಕಾರ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ರಚಿಸಲಾಗಿದೆ.<br><br>ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದ ಶಿಫಾರಸ್ಸಿನಂತೆ ತಾಲ್ಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ನಿರ್ಣಯಿಸಿ ಸರ್ಕಾರವು ದಿನಾಂಕ: 01-03-2023 ರಂದು ಅಧಿಸೂಚನೆ ಹೊರಡಿಸಿತ್ತು.<br><br>ನಂತರ ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿಸಂಖ್ಯೆ: 20426/2021ರ ಪ್ರಕರಣದಲ್ಲಿ ದಿನಾಂಕ: 28-06-2023 ರಂದು ನೀಡಿದ ನಿರ್ದೇಶನದಂತೆ ರಾಜ್ಯದ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ರೀಡೂ(Redo) ಮಾಡಲು ಸರ್ಕಾರವು ತಿರ್ಮಾನಿಸಿತು.<br><br>ನಂತರ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ಹೊಸದಾಗಿ ರಚಿಸಲಾಯಿತು. ಆಯೋಗದ ಶಿಫಾರಸ್ಸಿನಂತೆ ಸರ್ಕಾರವು, ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಯನ್ನು ನಿರ್ಣಯಿಸಿ ಅಧಿಸೂಚನೆ ಹೊರಡಿಸಿದೆ.<br><br>ಪ್ರಸ್ತುತ ಸರ್ಕಾರವು ರಾಜ್ಯದ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳ ಮೀಸಲಾತಿ ನಿಗದಿಪಡಿಸುವ ಸಿದ್ಧತೆಯಲ್ಲಿದೆ.<br><br>ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳ ಮೀಸಲಾತಿ ನಿಗದಿಪಡಿಸುವ ಕಾರ್ಯ ಪೂರ್ಣ ಗೊಳಿಸಿದ ತಕ್ಷಣ ಅಧಿಸೂಚನೆ ಹೊರಡಿಸಿ ಚುನಾವಣಾ ಆಯೋಗಕ್ಕೆ ಕಳುಹಿಸಲಾಗುವುದು. ಚುನಾವಣಾ ಆಯೋಗವು ನಿಯಮಾನುಸಾರ ಚುನಾವಣೆ ನಡೆಸಲು ದಿನಾಂಕಗಳನ್ನು ನಿಗದಿಪಡಿಸುವುದು. |

| | | |
|---|---|---|
| (ಆ) | ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಸದಸ್ಯರ ಪ್ರಮುಖ ಕರ್ತವ್ಯಗಳೇನು; | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 110-ಎ ರಲ್ಲಿ ಪಂಚಾಯತ್ ಸದಸ್ಯರ ಕರ್ತವ್ಯಗಳು ಮತ್ತು ಜವಾಬ್ದಾರಿಗಳ ಬಗ್ಗೆ ನಿರ್ದಿಷ್ಟಪಡಿಸಲಾಗಿರುತ್ತದೆ ವಿವರವನ್ನು ಅನುಬಂಧದಲ್ಲಿ ನೀಡಿದೆ. |
| (ಇ) | ಸರ್ಕಾರವು ತಾಲ್ಲೂಕು ಪಂಚಾಯಿತಿಯನ್ನೇ ರದ್ದುಪಡಿಸುವ ಪ್ರಸ್ತಾವನೆಯ ಪರಿಶೀಲನೆಯಲ್ಲಿದೆಯೇ; | -ಇಲ್ಲ- |
| (ಈ) | ಯಾವ ಕಾಲಮಿತಿಯಲ್ಲಿ ಈ ಚುನಾವಣೆಗಳನ್ನು ನಡೆಸಲು ಸರ್ಕಾರ ಕ್ರಮ ಕೈಗೊಳ್ಳುವುದು? | ಪ್ರಸ್ತುತ ಸರ್ಕಾರವು ರಾಜ್ಯದ ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳ ಮೀಸಲಾತಿ ನಿಗದಿಪಡಿಸುವ ಸಿದ್ಧತೆಯಲ್ಲಿದೆ.<br><br>ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯಿತಿ ಕ್ಷೇತ್ರಗಳ ಮೀಸಲಾತಿ ನಿಗದಿಪಡಿಸುವ ಕಾರ್ಯ ಪೂರ್ಣಗೊಳಿಸಿದ ತಕ್ಷಣ ಅಧಿಸೂಚನೆ ಹೊರಡಿಸಿ ಚುನಾವಣಾ ಆಯೋಗಕ್ಕೆ ಕಳುಹಿಸಲಾಗುವುದು. ಚುನಾವಣಾ ಆಯೋಗವು ನಿಯಮಾನುಸಾರ ಚುನಾವಣೆ ನಡೆಸಲು ದಿನಾಂಕಗಳನ್ನು ನಿಗದಿಪಡಿಸುವುದು. |

ಸಂಖ್ಯೆ: ಗ್ರಾಅಪ 21 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

ಅನುಬಂಧ

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993

## [1][ಅಧ್ಯಾಯ IV - ಎ

## ಪಂಚಾಯತ್ ಸದಸ್ಯರ ಕರ್ತವ್ಯಗಳು ಮತ್ತು ಜವಾಬ್ದಾರಿಗಳು

**110ಎ. ಪಂಚಾಯತ್ ಸದಸ್ಯರ ಕರ್ತವ್ಯಗಳು ಮತ್ತು ಜವಾಬ್ದಾರಿಗಳು.**–ಪಂಚಾಯತ್‌ನ ಪ್ರತಿಯೊಬ್ಬ ಸದಸ್ಯನು ಈ ಮುಂದಿನ ಕರ್ತವ್ಯಗಳು ಮತ್ತು ಜವಾಬ್ದಾರಿಗಳನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ಪಂಚಾಯಿತಿಯ ಪ್ರತಿಯೊಂದು ವರ್ಗ ಮತ್ತು ಸ್ಥಳೀಯ ಮತದಾನ ಕ್ಷೇತ್ರಗಳ ಹಿತಾಸಕ್ತಿಗಳನ್ನು ಪರಿಣಾಮಕಾರಿಯಾಗಿ ಪ್ರತಿನಿಧಿಸುವುದು;

(ಬಿ) ಪಂಚಾಯಿತಿಯ ನಿವಾಸಿಯು ಮಾಡಿದ ವಿಚಾರಣೆಗಳಿಗೆ ಮತ್ತು ಮನವಿಗಳಿಗೆ ನ್ಯಾಯಯುತವಾಗಿ ಮತ್ತು ನಿಷ್ಪಕ್ಷಪಾತವಾಗಿ ಪ್ರತಿಕ್ರಿಯಿಸುವುದು;

(ಸಿ) ಸಮುದಾಯದ ಅಭಿಪ್ರಾಯಗಳನ್ನು ಪ್ರತಿನಿಧಿಸುವ ಮೂಲಕ ಸಮುದಾಯ ಮುಂದಾಳತ್ವವನ್ನು ಕಲ್ಪಿಸುವುದು;

(ಡಿ) ನಡತೆ ಮತ್ತು ನೈತಿಕತೆಯ ಗರಿಷ್ಠ ಗುಣಮಟ್ಟವನ್ನು ನಿರ್ವಹಿಸುವುದು;

(ಇ) ಸಾರ್ವಜನಿಕ ಹಿತಾಸಕ್ತಿಯಲ್ಲಿ ಮಾತ್ರವೇ ಸೇವೆ ಮಾಡುವುದು ಮತ್ತು ಯಾವುದೇ ವ್ಯಕ್ತಿಯ ಅನುಕೂಲ ಅಥವಾ ಅನಾನುಕೂಲವನ್ನು ಪ್ರದಾನ ಮಾಡುವಲ್ಲಿ ಬೇಧಭಾವ ತೋರಿಸಬಾರದು;

(ಎಫ್) ಯಾವುದೇ ವ್ಯಕ್ತಿಯ ವಿರುದ್ಧ ಬೇಧಭಾವ ತೋರದೇ ಸಮಾನತೆಯನ್ನು ಪ್ರೋತ್ಸಾಹಿಸುವುದು ಮತ್ತು ಅವರ ಮತ, ವಯಸ್ಸು, ಧರ್ಮ, ಲಿಂಗ ಅಥವಾ ಅಸಮರ್ಥತೆಯನ್ನು ಪರಿಗಣಿಸದೆ (regardless) ಅವರನ್ನು ಗೌರವದಿಂದ ಕಾಣುವುದು;

(ಜಿ) ಜನರಿಗೆ ಅವರು ಅರ್ಹರಾಗಿರುವ ಮಾಹಿತಿಯನ್ನು ಪಡೆಯುವುದಕ್ಕೆ ಅವಕಾಶವನ್ನು ಕಲ್ಪಿಸುವುದು;

(ಎಚ್) ಯಾವುದೇ ವಿಷಯದಲ್ಲಿ ಆತನು ಹಣಕಾಸಿನ (pecuniary) ಆಸಕ್ತಿಯನ್ನು ಹೊಂದಿರುವಾಗ ಆತನನ್ನು ಯಾವುದೇ ಚರ್ಚೆ ಅಥವಾ ಮತದಾನದಲ್ಲಿ ಭಾಗವಹಿಸುವುದರಿಂದ ಅಂಥ ವಿಷಯದ ಪರಿಗಣನೆಯಲ್ಲಿ ಸಭೆಯಿಂದ ಹಿಂತೆಗೆದುಕೊಳ್ಳುವಲ್ಲಿ ಸ್ವಯಂ ನಿಯಂತ್ರಣ ಹೊಂದುವುದು;

(ಐ) ಆದ್ಯತೆಗಳು ಮತ್ತು ಗುರಿಗಳನ್ನು ಸಾಧಿಸುವಲ್ಲಿ ಪಂಚಾಯತ್‌ನ ಕಾರ್ಯ ನಿರ್ವಹಣೆಯನ್ನು ಪರಿಶೀಲಿಸುವುದು.

(ಜೆ) ಸರ್ಕಾರವು ಮಾಡಿದ ಆದ್ಯತೆಗಳನ್ನು ನಿರ್ವಹಿಸುವುದು ಮತ್ತು ಸ್ಥಳೀಯ ಸಂದರ್ಭದಲ್ಲಿ ಆ ಆದ್ಯತೆಗಳನ್ನು ಎಷ್ಟು ಅತ್ಯುತ್ತಮವಾಗಿ ನೀಡಬಹುದು ಎಂಬುದನ್ನು ತೀರ್ಮಾನಿಸುವುದು;

(ಕೆ) ಪ್ರದೇಶದ ಉತ್ತಮ ಆಡಳಿತದಲ್ಲಿ ಭಾಗವಹಿಸುವುದು ಮತ್ತು ನಿರ್ಧಾರವನ್ನು ತೆಗೆದುಕೊಳ್ಳುವಲ್ಲಿ ಪಂಚಾಯಿತಿ ನಿವಾಸಿಗಳ ಪಾಲ್ಗೊಳ್ಳುವಿಕೆಯನ್ನು ಸಕ್ರಿಯವಾಗಿ ಪ್ರೋತ್ಸಾಹಿಸುವುದು.][1]

*1. 2015ರ ಅಧಿನಿಯಮ ಸಂಖ್ಯೆ 44ರ ಮೂಲಕ ದಿನಾಂಕ: 25.02.2016ರಿಂದ ಸೇರಿಸಲಾಗಿದೆ.*